ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 27–10–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಒಂದು ಕೈಗಾರಿಕೆ, ಒಂದು ಗಿಡ, ಎರಡು ಕಸದ ಬುಟ್ಟಿ ಕಾರ್ಯಕ್ರಮಕ್ಕೆ ಚಾಲನೆ:<br><br>ಶ್ರೀ ಕಾಗೋಡು ತಿಮ್ಮಪ್ಪ,<br>ವಿಧಾನಸಭಾಧ್ಯಕ್ಷರು,<br>ಕರ್ನಾಟಕ ವಿಧಾನಸಭೆ.<br>ಬೆಂಗಳೂರು.<br><br>ಅಧ್ಯಕ್ಷತೆ:<br><br>ಶ್ರೀ ಎನ್.ಎ. ಹ್ಯಾರಿಸ್,<br>ಶಾಸಕರು ಹಾಗೂ ಅಧ್ಯಕ್ಷರು, ಕರ್ನಾಟಕ ರಾಜ್ಯ ಯುವ ಶಾಸಕರ ವೇದಿಕೆ. | 28–10–2014<br>ಮಂಗಳವಾರ<br>ಬೆಳಿಗ್ಗೆ<br>10–00 ಗಂಟೆಗೆ | ಪೀಣ್ಯಾ ಕೈಗಾರಿಕಾ ಸಂಘ, ಪೀಣ್ಯಾ, ಬೆಂಗಳೂರು– 560 058 |
| 2. | ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ನೂತನ ಮಾಹಿತಿ ಆಯುಕ್ತರುಗಳಿಗೆ ಅಧಿಕಾರ ಮತ್ತು ಗೋಪ್ಯತಾ ಪ್ರಮಾಣ ವಚನ ಸ್ವೀಕಾರ.<br><br>ಪ್ರಮಾಣ ವಚನ ಬೋಧನೆ:<br><br>ಶ್ರೀ ವಾಜುಭಾಯಿ ವಾಲ,<br>ಘನತೆವೆತ್ತ ಕರ್ನಾಟಕದ ರಾಜ್ಯಪಾಲರು<br><br>*ವಿ.ಸೂ:*<br><br>*ಈ ಕಾರ್ಯಕ್ರಮಕ್ಕೆ ಮಾನ್ಯತಾ ಪತ್ರ* | 28–10–2014<br>ಮಂಗಳವಾರ<br>ಸಂಜೆ<br>5–00 ಗಂಟೆಗೆ | ಬ್ಯಾಂಕ್ವೆಟ್ ಹಾಲ್,<br>ರಾಜಭವನ,<br>ಬೆಂಗಳೂರು. |

| | | | |
|---|---|---|---|
| | *ಹಾಗೂ ಆಹ್ವಾನ ಪತ್ರಿಕೆ ಹೊಂದಿರುವ ಮಾಧ್ಯಮ ಪ್ರತಿನಿಧಿಗಳಿಗೆ ಮಾತ್ರ ಪ್ರವೇಶ* | | |
| **3.** | **PRESS MEET:**<br><br>**Hon'ble Mr. Justice N.K. Patil, High Court of Karnataka and Executive Chairman, Karnataka State Legal Services Authority, Bangalore.** | **28–10–2014**<br><br>**Tuesday**<br><br>**at**<br>**5-00 PM** | **Meeting Hall of Hon'ble Executive Chairman, Karnataka State Legal Services Aurhority, 1st Floor, High Court Building Bangalore – 560 001.** |

## ಮಾಧ್ಯಮದವರ ಗಮನಕ್ಕೆ

ಕರ್ನಾಟಕದ ರಾಜ್ಯಪಾಲ ಶ್ರೀ ವಾಜುಭಾಯಿ ವಾಲ ಅವರು ಅಕ್ಟೋಬರ್ 28 ರಂದು ಮಂಗಳವಾರ ಸಂಜೆ 5–00 ಗಂಟೆಗೆ ರಾಜಭವನದ ಔತಣ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ನೂತನವಾಗಿ ನೇಮಕಗೊಂಡಿರುವ ರಾಜ್ಯ ಮಾಹಿತಿ ಆಯುಕ್ತರಿಗೆ ಅಧಿಕಾರ ಮತ್ತು ಗೌಪ್ಯತಾ ಪ್ರಮಾಣವಚನವನ್ನು ಬೋಧಿಸಲಿದ್ದಾರೆ.

ರಾಜಭವನದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸ್ಥಳಾವಕಾಶದ ಕೊರತೆ ಇರುವುದರಿಂದ ಈ ಕಾರ್ಯಕ್ರಮದ ವರದಿಗಾಗಿ ರಾಜ್ಯಮಟ್ಟದ ದಿನಪತ್ರಿಕೆ, ಸುದ್ದಿ ವಾಹಿನಿಯ ತಲಾ ಒಬ್ಬರಿಗೆ ಪ್ರವೇಶ ಪತ್ರವನ್ನು ನೀಡಲಾಗುತ್ತಿದೆ.

ಈ ಕಾರ್ಯಕ್ರಮಕ್ಕೆ ಹಾಜರಾಗಲು ಪ್ರವೇಶಪತ್ರ ಕಡ್ಡಾಯವಾಗಿರುವ ಹಿನ್ನೆಲೆಯಲ್ಲಿ ದಿನಾಂಕ 28–10–2014 ರಂದು ಬೆಳಿಗ್ಗೆ 10–30 ಗಂಟೆಯಿಂದ ಮಧ್ಯಾಹ್ನ 2–00 ಗಂಟೆಯ ಒಳಗೆ ಮಾನ್ಯತಾ ಪತ್ರ ಹೊಂದಿರುವ ಸಂಬಂಧಿತ ಮಾಧ್ಯಮ ಪ್ರತಿನಿಧಿಗಳು ಪ್ರವೇಶ ಪತ್ರವನ್ನು ಸುದ್ದಿ ಮತ್ತು ಪತ್ರಿಕಾ ಶಾಖೆಯಿಂದ ಪಡೆದುಕೊಳ್ಳಬಹುದು.
ಸಹನಾ/ಬಿಜೆಪಿ/ಕೆಎಂ

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಅಭಿವೃದ್ಧಿ ಪತ್ರಿಕೋದ್ಯಮ, ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪ್ರಕಟ

**ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)**

ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು 2012 ಮತ್ತು 2013 ನೇ ಸಾಲಿಗೆ ರಾಜ್ಯ ಸರ್ಕಾರ ಪ್ರಕಟಿಸಿದೆ.

ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿಯನ್ನು 2012 ನೇ ಸಾಲಿಗೆ ಮೈಸೂರಿನ ಕನ್ನಡ ಪ್ರಭ ಹಿರಿಯ ವಿಶೇಷ ವರದಿಗಾರ ಶ್ರೀ ಅಂಶಿ ಪ್ರಸನ್ನಕುಮಾರ್ ಹಾಗೂ 2013 ನೇ ಸಾಲಿಗೆ ಮಂಗಳೂರು ಆಕಾಶವಾಣಿ ಕಾರ್ಯಕ್ರಮ ನಿರ್ವಾಹಕ ಡಾ: ಸದಾನಂದ ಪೆರ್ಲಾ ಅವರಿಗೆ ಪ್ರಕಟಿಸಲಾಗಿದೆ.

ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು 2012 ನೇ ಸಾಲಿಗೆ ದಕ್ಷಿಣದ ಪುತ್ತೂರಿನ ಹವ್ಯಾಸಿ ಪತ್ರಕರ್ತ ಡಾ: ನರೇಂದ್ರ ರೈ ದೇರ್ಲ ಹಾಗೂ 2013 ನೇ ಸಾಲಿಗೆ ಸಾಗರದ ವಿಜಯವಾಣಿ ವರದಿಗಾರ ಶ್ರೀ ದೀಪಕ್ ಸಾಗರ್ ಅವರಿಗೆ ಪ್ರಕಟಿಸಲಾಗಿದೆ.

(ಭಾವಚಿತ್ರ ಲಗತ್ತಿಸಿದೆ)

**ಸಹನಾ/ಕೆಎಂ**

## ನವೆಂಬರ್ 29 ರಂದು ಡಾ. ರಾಜ್‌ಕುಮಾರ್ ಸ್ಮಾರಕ ಲೋಕಾರ್ಪಣೆ: ಸಚಿವ ಆರ್. ರೋಷನ್ ಬೇಗ್

ಬೆಂಗಳೂರು, ಅ. 27 (ಕರ್ನಾಟಕ ವಾರ್ತೆ)–

**ವರನಟ ಡಾ. ರಾಜ್‌ಕುಮಾರ್ ಸ್ಮಾರಕವನ್ನು ನವೆಂಬರ್ 29ರಂದು ಲೋಕಾರ್ಪಣೆ ಮಾಡಲಾಗುವುದು ಎಂದು ಸ್ವಾಗತ ಸಮಿತಿಯ ಅಧ್ಯಕ್ಷರು ಹಾಗೂ ಮೂಲಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಂದು ತಿಳಿಸಿದರು.**

**ಇಂದು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು, ಬೆಳಿಗ್ಗೆ ಡಾ. ರಾಜ್‌ಕುಮಾರ್ ಅವರ ಸಮಾಧಿಯ ಬಳಿ ಅವರ ಪುತ್ಥಳಿ ಅನಾವರಣ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಸಂಜೆ ಅರಮನೆ ಮೈದಾನದಲ್ಲಿ ಸಭಾ ಕಾರ್ಯಕ್ರಮ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ ಎಂದರು.**

**ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಖ್ಯಾತ ನಟರಾದ ಶ್ರೀ ಅಮಿತಾಬ್ ಬಚ್ಚನ್, ಶ್ರೀ ರಜನೀಕಾಂತ್, ಶ್ರೀ ಕಮಲಹಾಸನ್, ಶ್ರೀ ಚಿರಂಜೀವಿ, ಶ್ರೀ ಮುಮ್ಮುಟ್ಟಿ, ವಸತಿ ಸಚಿವರೂ ಆಗಿರುವ ಶ್ರೀ ಅಂಬರೀಷ್ ಹಾಗೂ ಶ್ರೀಮತಿ ಬಿ. ಸರೋಜಾದೇವಿ ಅವರನ್ನು ಆಹ್ವಾನಿಸಲು ಸಮಿತಿಯು ತೀರ್ಮಾನಿಸಿತು.**

ಸ್ಮಾರಕ ಉದ್ಘಾಟನೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ನೆರವೇರಿಸುವ ಸಂಬಂಧ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್ ಬೇಗ್ ಅಧ್ಯಕ್ಷತೆಯಲ್ಲಿ ಸ್ವಾಗತ ಸಮಿತಿ ಹಾಗೂ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ ಗಂಗರಾಜು ಅವರ ಅಧ್ಯಕ್ಷತೆಯಲ್ಲಿ ಸಾಂಸ್ಕೃತಿಕ ಸಮಿತಿಗಳನ್ನು ರಚಿಸಲಾಗಿದೆ.

ಸ್ವಾಗತ ಸಮಿತಿಯಲ್ಲಿ ವಸತಿ ಸಚಿವ ಶ್ರೀ ಎಂ.ಎಚ್. ಅಂಬರೀಷ್, ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶ್ರೀಮತಿ ಉಮಾಶ್ರೀ, ವಿಧಾನ ಸಭಾ ಸದಸ್ಯ ಶ್ರೀ ಮುನಿರತ್ನ, ವಿಧಾನಪರಿಷತ್ ಸದಸ್ಯರಾದ ಶ್ರೀಮತಿ ಜಯಮಾಲಾ, ಶ್ರೀಮತಿ ತಾರಾ ಅನೂರಾಧ, ಶ್ರೀ ಜಗ್ಗೇಶ್, ಶ್ರೀ ಸಂದೇಶ್ ನಾಗರಾಜ್, ಶ್ರೀ ಇ. ಕೃಷ್ಣಪ್ಪ, ಶ್ರೀ ಎಚ್.ಡಿ. ಗಂಗರಾಜು, ಪ್ರೊ. ಬರಗೂರು ರಾಮಚಂದ್ರಪ್ಪ, ಶ್ರೀ ರಾಘವೇಂದ್ರ ರಾಜ್ ಕುಮಾರ್, ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರು ಹಾಗೂ ಶ್ರೀ ಎಂ. ರವಿ ಕುಮಾರ್ ಅವರು ಸದಸ್ಯರಾಗಿದ್ದಾರೆ.

ಸಾಂಸ್ಕೃತಿಕ ಸಮಿತಿಯಲ್ಲಿ ಕಾರ್ಯಾಧ್ಯಕ್ಷರಾಗಿ ಶ್ರೀ ಸಾ.ರಾ. ಗೋವಿಂದ್, ಸಂಚಾಲಕರಾಗಿ ಶ್ರೀ ಎಸ್. ನಾರಾಯಣ್, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರು, ರಾಘವೇಂದ್ರ ರಾಜ್‌ಕುಮಾರ್, ಪ್ರೊ. ಬರಗೂರು ರಾಮಚಂದ್ರಪ್ಪ, ಅಧ್ಯಕ್ಷರು, ಚಲನಚಿತ್ರ ನಿರ್ಮಾಪಕರ ಸಂಘ, ಅಧ್ಯಕ್ಷರು, ಚಲನಚಿತ್ರ ನಿರ್ದೇಶಕರ ಸಂಘ, ಅಧ್ಯಕ್ಷರು, ಚಲನಚಿತ್ರ ಕಲಾವಿದರ ಸಂಘ, ಅಧ್ಯಕ್ಷರು, ಚಲನಚಿತ್ರ ಕಾರ್ಮಿಕರ ಸಂಘ, ಅಧ್ಯಕ್ಷರು, ಚಲನಚಿತ್ರ ತಂತ್ರಜ್ಞರ ಸಂಘ, ಅಧ್ಯಕ್ಷರು, ಕಿರು ಚಲನಚಿತ್ರ ಸಂಘ, ಅಧ್ಯಕ್ಷರು, ಛಾಯಾಚಿತ್ರ ಸಂಘ, ಸದಸ್ಯ ಕಾರ್ಯದರ್ಶಿ, ಡಾ. ರಾಜ್‌ಕುಮಾರ್ ಪ್ರತಿಷ್ಠಾನ ಇವರು ಸದಸ್ಯರಾಗಿದ್ದಾರೆ.

ಸಭೆಯಲ್ಲಿ ವಸತಿ ಸಚಿವ ಶ್ರೀ ಅಂಬರೀಷ್, ವಿಧಾನ ಪರಿಷತ್ ಸದಸ್ಯರಾದ ಶ್ರೀ ಜಗ್ಗೇಶ್, ಶ್ರೀಮತಿ ಜಯಮಾಲಾ, ಶ್ರೀಮತಿ ತಾರಾ ಅನುರಾಧ, ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ ಗಂಗರಾಜು, ನಟ ರಾಘವೇಂದ್ರ ರಾಜ್‌ಕುಮಾರ್, ನಿರ್ದೇಶಕ ಶ್ರೀ ಎಸ್. ನಾರಾಯಣ್, ಸಾಹಿತಿ ಪ್ರೊ. ಬರಗೂರು ರಾಮಚಂದ್ರಪ್ಪ, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಶ್ರೀ ಎನ್.ಆರ್. ವಿಶುಕುಮಾರ್, ಡಾ. ರಾಜ್‌ಕುಮಾರ್ ಪ್ರತಿಷ್ಠಾನದ ಸದಸ್ಯ ಕಾರ್ಯದರ್ಶಿ ಹಾಗೂ ಕಂಠೀರವ ಸ್ಟುಡಿಯೋ ವ್ಯವಸ್ಥಾಪಕ ನಿರ್ದೇಶಕ ಶ್ರೀ ಎಂ. ರವಿಕುಮಾರ್ ಉಪಸ್ಥಿತರಿದ್ದರು.

ಚಿತ್ರ ಶೀರ್ಷಿಕೆ :

ಡಾ: ರಾಜ್‌ಕುಮಾರ್ ಸ್ಮಾರಕ ಲೋಕಾರ್ಪಣೆ ಕಾರ್ಯಕ್ರಮದ ಪೂರ್ವಭಾವಿ ಸಭೆಯು ಮೂಲ ಸೌಕರ್ಯಾಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪಕ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಸಭೆಯಲ್ಲಿ ವಸತಿ ಸಚಿವ ಶ್ರೀ ಅಂಬರೀಷ್, ವಿಧಾನ ಪರಿಷತ್ ಸದಸ್ಯರಾದ ಶ್ರೀ ಜಗ್ಗೇಶ್, ಶ್ರೀಮತಿ ಜಯಮಾಲಾ, ಶ್ರೀಮತಿ ತಾರಾ ಅನುರಾಧ, ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ

**ಗಂಗರಾಜು, ನಟ ರಾಘವೇಂದ್ರ ರಾಜ್‌ಕುಮಾರ್, ನಿರ್ದೇಶಕ ಶ್ರೀ ಎಸ್. ನಾರಾಯಣ್, ಸಾಹಿತಿ ಪ್ರೊ. ಬರಗೂರು ರಾಮಚಂದ್ರಪ್ಪ, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಶ್ರೀ ಎನ್.ಆರ್. ವಿಶುಕುಮಾರ್, ಡಾ. ರಾಜ್‌ಕುಮಾರ್ ಪ್ರತಿಷ್ಠಾನದ ಸದಸ್ಯ ಕಾರ್ಯದರ್ಶಿ ಹಾಗೂ ಕಂಠೀರವ ಸ್ಟುಡಿಯೋ ವ್ಯವಸ್ಥಾಪಕ ನಿರ್ದೇಶಕ ಶ್ರೀ ಎಂ. ರವಿಕುಮಾರ್ ಉಪಸ್ಥಿತರಿದ್ದರು.**

**ಸಹನಾ/ಕೆಎಂ**

## ಶಿವಮೊಗ್ಗ, ಹಾಸನ ಪಶುವೈದ್ಯಕೀಯ ಕಾಲೇಜುಗಳಿಗೆ ಮಾನ್ಯತೆ

**ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)**

ಶಿವಮೊಗ್ಗ ಹಾಗೂ ಹಾಸನದ ಸರ್ಕಾರಿ ಪಶುವೈದ್ಯಕೀಯ ಕಾಲೇಜುಗಳಿಗೆ ಭಾರತೀಯ ಪಶುವೈದ್ಯಕೀಯ ಪರಿಷತ್ತು ಮಾನ್ಯತೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾಗ ಹಾಗೂ ಪಶುಸಂಗೋಪನಾ ಸಚಿವ ಶ್ರೀ ಟಿ.ಬಿ. ಜಯಚಂದ್ರ ಅವರು ತಿಳಿಸಿದರು.

ಇಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು ಭಾರತೀಯ ಪಶು ವೈದ್ಯಕೀಯ ಪರಿಷತ್ತಿನ ಅಧ್ಯಕ್ಷ ಡಾ: ಉಮೇಶ್ ಚಂದ್ರ ಶರ್ಮ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಎರಡೂ ಕಾಲೇಜುಗಳಿಗೆ ಮಾನ್ಯತೆ ನೀಡಲು ತೀರ್ಮಾನಿಸಲಾಗಿದೆ ಎಂದು ನುಡಿದರು. ಶಿವಮೊಗ್ಗದ ಪಶುವೈದ್ಯಕೀಯ ಕಾಲೇಜಿಗೆ 24-8-2011 ರಿಂದ ಅನ್ವಯವಾಗುವಂತೆ ಹಾಗೂ ಹಾಸನ ಪಶುವೈದ್ಯಕೀಯ ಕಾಲೇಜಿಗೆ 24-8-2012 ರಿಂದ ಅನ್ವಯವಾಗುವಂತೆ ಮಾನ್ಯತೆ ನೀಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಈವರೆಗೆ ಈ ಕಾಲೇಜುಗಳಿಗೆ ಮಾನ್ಯತೆ ದೊರೆಯದ ಕಾರಣ ಇಲ್ಲಿ ಪದವಿ ಪಡೆದ ವಿದ್ಯಾರ್ಥಿಗಳು ತೊಂದರೆಗೀಡಾಗಿದ್ದರು. ನಮ್ಮ ಸರ್ಕಾರವು ಮೂಲಸೌಕರ್ಯ ಅಭಿವೃದ್ಧಿಗಾಗಿ ಶಿವಮೊಗ್ಗದ ಕಾಲೇಜಿಗೆ 137 ಕೋಟಿ ರೂ. ಹಾಗೂ ಹಾಸನ ಕಾಲೇಜಿಗೆ 131 ಕೋಟಿ ರೂ,. ಬಿಡುಗಡೆ ಮಾಡಿತ್ತು. ಸರ್ಕಾರದ ಪ್ರಯತ್ನದ ಫಲವಾಗಿ ಈ ಕಾಲೇಜುಗಳಲ್ಲಿ ಪದವಿ ಪಡೆದ ವಿದ್ಯಾರ್ಥಿಗಳ ಆತಂಕ ನಿವಾರಣೆಯಾಗಿದೆ ಎಂದು ಸಚಿವರು ತಿಳಿಸಿದರು.

**ಸಹನಾ/ಕೆಎಂ**

## ಭ್ರಷ್ಟಾಚಾರ ವಿರೋಧಿ ಜಾಗೃತಿ ಸಪ್ತಾಹ

ಬೆಂಗಳೂರು, ಅ. 27 (ಕರ್ನಾಟಕ ವಾರ್ತೆ)-

ಭ್ರಷ್ಟಾಚಾರ ವಿರೋಧಿ ಜಾಗೃತಿ ಸಪ್ತಾಹದ ಅಂಗವಾಗಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಸಚಿವಾಲಯದ ಉನ್ನತ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಯು.ಟಿ. ಖಾದರ್, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ ಪಾಟೀಲ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಕೌಶಿಕ್ ಮುಖರ್ಜಿ ಉಪಸ್ಥಿತರಿದ್ದರು.

**ಸಹನಾ/ಕೆಎಂ**

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕ ಸೇವಾ ಆಯೋಗದ ದಿನಾಂಕ 09–01–2013 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯದಲ್ಲಿನ ಸಹಾಯಕ ನಿರ್ದೇಶಕರು (ಜೀವಶಾಸ್ತ್ರ ವಿಭಾಗ/ವಿಷವಿಜ್ಞಾನ ವಿಭಾಗ) ಮತ್ತು ವೈಜ್ಞಾನಿಕ ಅಧಿಕಾರಿ (ಜೀವಶಾಸ್ತ್ರ ವಿಭಾಗ/ದಸ್ತಾವೇಜು ವಿಭಾಗ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ 21–10–2014 ರಂದು ಆಯೋಗದ ಅಂತರ್ಜಾಲ “http:kpsc.kar.nic.in” ದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಆಪೇಕ್ಷಿಸುವ ಅಭ್ಯರ್ಥಿಗಳು ಈ ಆಯ್ಕೆಪಟ್ಟಿಗಳನ್ನು ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001, ಇವರಿಗೆ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಸಮ:ಬಾಬು:ಜಿಪಿಆರ್.